## ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ. ದಂ.ಯವರ ನ್ಯಾಯಾಲಯ, ಕುಂದಾಪುರ

**ಸಿ.ಸಿ ನಂಬ್ರ: 1839/2021**

ಸರ್ಕಾರದ ಪರ
ಗಂಗೊಳ್ಳಿ ಠಾಣಾ ಪೊಲೀಸರು. --- ಪಿರ್ಯಾದಿದಾರರು

-ಮತ್ತು-

ನಟೇಶ ವಿಷ್ಣು ಖಾರ್ವಿ --- ಆರೋಪಿತರು

**:ದೋಷಾರೋಪಣೆ:**

**ಶ್ರೀಮತಿ ಶೃತಿ ಶ್ರೀ ಎಸ್. ಬಿ.ಎ., ಎಲ್‌ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ,. ಕುಂದಾಪುರ ಆದ ನಾನು ಆರೋಪಿತರಾದ ನಿಮಗೆ ಈ ಮೂಲಕ ಮಾಡುವ ದೋಷಾರೋಪಣೆ ಏನೆಂದರೆ:**

ನಟೇಶ ವಿಷ್ಣು ಖಾರ್ವಿ, 34 ವರ್ಷ,
ತಂದೆ: ವಿಷ್ಣು ಖಾರ್ವಿ,
ವಾಸ: #109 ದೇವರಗಡ್ಡೆ, ಮಂಕಿ ಗ್ರಾಮ,
ಹೊನ್ನಾವರ ತಾಲೂಕು, ಉತ್ತರ ಕನ್ನಡ ಜಿಲ್ಲೆ.

ಸಾಕ್ಷಿ1 ನೇ ಯವರಿಗೆ ಆಪಾದಿತನೊಂದಿಗೆ ದಿ. 18.04.2012 ರಂದು ತ್ರಾಸಿ, ಕಮ್ಮರಕೊಡ್ಲು, ಶ್ರೀ ಮಹಾಗಣಪತಿ ದೇವಸ್ಥಾನದಲ್ಲಿ ಹಿಂದೂ ಸಂಪ್ರದಾಯದಂತೆ ವಿವಾಹವಾಗಿದ್ದು ಮದುವೆಯ ಸಮಯದಲ್ಲಿ ಆರೋಪಿಯ ಬೇಡಿಕೆಯಂತೆ 2 ಲಕ್ಷ ನಗದು ಮತ್ತು 15 ಪವನ್ ಚಿನ್ನಾಭರಣವನ್ನು ಹಾಕಿ ಮದುವೆ ಮಾಡಿಕೊಟ್ಟಿರುವುದಾಗಿದೆ, ಮದುವೆಯ ನಂತರ ಆರೋಪಿಯು, ಆತನ ಮನೆಯಾದ ಹೊನ್ನಾವರ ಗ್ರಾಮದ ಮಂಕಿಯಲ್ಲಿರುವಾಗ ಹೆಚ್ಚಿನ ವರದಕ್ಷಿಣೆ ಹಣಕ್ಕಾಗಿ ದೈಹಿಕ ಹಾಗೂ ಮಾನಸಿಕ ಹಿಂಸೆ ನೀಡಿ ಕಿರುಕುಳ ನೀಡುತ್ತಿದ್ದು, 2016 ರಲ್ಲಿ ಸಾಕ್ಷಿ1 ನೇಯವರನ್ನು ಗಂಡನ ಮನೆಯಿಂದ ಹೊರಗೆ ಹಾಕಿದ್ದು, ಸಾಕ್ಷಿ1 ನೇಯವರು ತನ್ನ ತಾಯಿ ಮನೆಯಾದ ಗಂಗೊಳ್ಳಿಯಲ್ಲಿರುವಾಗ ಕೂಡಾ ಆರೋಪಿಯು ಗಂಗೊಳ್ಳಿಗೆ ಬಂದು ಅವಾಚ್ಯ ಶಬ್ದದಿಂದ ಬೈಯುತ್ತಿದ್ದುದಲ್ಲದೆ, ದೈಹಿಕವಾಗಿ ಹಲ್ಲೆ ನಡೆಸಿ, ವರದಕ್ಷಿಣೆ ಹಣ ತರದಿದ್ದರೆ ವಿಚ್ಚೇದನ ಕೊಡುತ್ತೇನೆ, ಈ ವಿಚಾರದಲ್ಲಿ ಪೊಲೀಸರಿಗೆ ದೂರು ನೀಡಿದಲ್ಲಿ ಮನೆಯವರೆಲ್ಲರನ್ನು ಕೊಲ್ಲುತ್ತೇನೆ ಎಂದು ಜೀವ ಬೆದರಿಕೆ ಹಾಕಿ ದೈಹಿಕ ಹಾಗೂ ಮಾನಸಿಕ ಕಿರುಕುಳ ನೀಡಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 498(ಎ) ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

2. ಆಪಾದಿತರಾದ ನೀವು ಸಾಕ್ಷಿ1 ನೇಯವರಿಗೆ ರಂಡೆ, ಮುಂಡೆ ಎಂದು ಅವಾಚ್ಯ ಶಬ್ದದಿಂದ ಬೈದು ಅವಮಾನ ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

3. ಆಪಾದಿತರಾದ ನೀವು ಸಾಕ್ಷಿ1 ನೇಯವರಿಗೆ ಕೈಯಿಂದ ಹಲ್ಲೆ ಮಾಡಿ ಸಾಮಾನ್ಯ ಸ್ವರೂಪದ ನೊವನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

4. ಆರೋಪಿತರಾದ ನೀವು ಸಾಕ್ಷಿ1 ನೇಯವರನ್ನುದ್ದೇಶಿಸಿ ವರದಕ್ಷಿಣೆ ಹಣ ತರದಿದ್ದರೆ ವಿಚ್ಛೇದನ ಕೊಡುತ್ತೇನೆ, ಈ ವಿಚಾರದಲ್ಲಿ ಪೊಲೀಸರಿಗೆ ದೂರು ನೀಡಿದಲ್ಲಿ ಮನೆಯವರೆಲ್ಲರನ್ನು ಕೊಲ್ಲುತ್ತೇನೆ ಎಂಬುದಾಗಿ ಜೀವ ಬೆದರಿಕೆ ಹಾಕಿ ಅಪರಾಧಿಕ ಭಯೋತ್ಪದನೆ ಉಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 506 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

5. ಆರೋಪಿತರಾದ ನೀವು ಸಾಕ್ಷಿ1 ನೇಯವರ ಮನೆಯವರನ್ನು ಒತ್ತಾಯಪಡಿಸಿ 2 ಲಕ್ಷ ನಗದು ಮತ್ತು 15 ಪವನ್ ಚಿನ್ನವನ್ನು ವರದಕ್ಷಿಣೆ ಪಡೆದುಕೊಂಡಿದ್ದು, ಆ ಮೂಲಕ ನೀವು ಕಲಂ 3 ರ ವರದಕ್ಷಿಣೆ ನಿಷೇಧ ಕಾಯ್ದೆ ಯಂತೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

6. ಅರೋಪಿಯದ ನೀವು ಮದುವೆಯ ನಂತರ ಸಾಕ್ಷಿ 1 ನೇಯವರಲ್ಲಿ ಹೆಚ್ಚಿನ ವರದಕ್ಷಿಣೆ ತರುವಂತೆ ಪೀಡಿಸಿರುತ್ತೀರಿ. ಆ ಮೂಲಕ ನೀವು ಕಲಂ 4 ರ ವರದಕ್ಷಿಣೆ ನಿಷೇಧ ಕಾಯ್ದೆ ಯಂತೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ

(ಸದರಿ ಆರೋಪಗಳ ಕುರಿತಂತೆ ನೀವು ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗಬೇಕೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ )

ದಿ. 25.07.2025.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ಕುಂದಾಪುರ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ನ್ಯಾಯಾಲಯ, ಕುಂದಾಪುರ

**ಸಿ.ಸಿ. ಸಂಖ್ಯೆ :1839/2021**

ಫಿರ್ಯಾದುದಾರರು : ಸರಕಾರದ ಪರವಾಗಿ ಗಂಗೊಳ್ಳಿ ಠಾಣಾ ಪೋಲಿಸರು,

- ವಿರುದ್ಧ-

ಆರೋಪಿ : ನಟೇಶ ವಿಷ್ಣು ಖಾರ್ವಿ, ತಂದೆಃ ವಿಷ್ಣು ಖಾರ್ವಿ.

**1.** ಮೇಲೆ ಹೇಳಿದಂತೆ ನಿಮಗೆ ಓಡಿ ಹೇಳಿ ವಿವರಿಸಿದ ದೋಷಾರೋಪಣಾ ಸಾರಾಂಶವನ್ನು ಅರ್ಥಮಾಡಿಕೊಂಡಿರಾ?

ಉ.

**2.** ಅಪರಾಧವನ್ನು ಒಪ್ಪಿ ಕೊಳ್ಳುವಿರಾ ಅಥವಾ ನಿಮ್ಮ ಪರ ಪ್ರತಿರಕ್ಷೆ ಇದೆಯಾ.?

ಉ.

ಮೇಲ್ಕಂಡ ದೋಷಾರೋಪಣಾ ಸಾರಾಂಶವನ್ನು ಆರೋಪಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಆರೋಪಿ ಕೊಟ್ಟ ಉತ್ತರವನ್ನು ಬರೆದುಕೊಂಡಿದ್ದು ಅವು ಸರಿಯಾಗಿರುತ್ತವೆಂದು ಈ ಮೂಲಕ ದೃಢಿಕರಿಸುತ್ತೇನೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,
ಕುಂದಾಪುರ.